# ಇಕ್ಕಟ್ಟಿಗೆ ಸಿಲುಕಿಸಲು ಕೈ ತಂತ್ರ

ಉವಾ 17/2/20

**ಬೆಂಗಳೂರು:** ವಿಧಾನಮಂಡಲದ ಜಂಟಿ ಅಧಿವೇಶನದಲ್ಲಿ ಬಿಜೆಪಿಯ ಆಡಳಿತ ವೈಫಲ್ಯ, ದ್ವಂದ್ವ ನಿಲುವು, ತಾರತಮ್ಯ ಧೋರಣೆ ವಿಚಾರಗಳನ್ನೇ ಪ್ರಧಾನವಾಗಿ ಪ್ರಸ್ತಾಪಿಸಿ ಇಕ್ಕಟ್ಟಿಗೆ ಸಿಲುಕಿಸಲು ಸಿದ್ಧತೆ ನಡೆಸಿರುವ ಪ್ರತಿಪಕ್ಷ ಕಾಂಗ್ರೆಸ್, ಪೌರತ್ವ ತಿದ್ದುಪಡಿ ಕಾಯ್ದೆ ಬಗ್ಗೆ ರಾಜ್ಯಪಾಲರು ತಮ್ಮ ಭಾಷಣದಲ್ಲಿ ಪ್ರಸ್ತಾಪಿಸಿದರೆ ಪ್ರತಿಭಟನೆ ನಡೆಸಲು ತೀರ್ಮಾನಿಸಿದೆ.

ಜಂಟಿ ಅಧಿವೇಶನದ ಹಿನ್ನೆಲೆಯಲ್ಲಿ ಭಾನುವಾರ ನಗರದ ಖಾಸಗಿ ಹೋಟೇಲ್‌ನಲ್ಲಿ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸುವ ಬಗ್ಗೆ ತಂತ್ರಗಾರಿಕೆ ರೂಪಿಸಲಾಗಿದೆ. ಸೋಮವಾರ ಬೆಳಗ್ಗೆ 10 ಗಂಟೆಗೆ ಮತ್ತೆ ಶಾಸಕಾಂಗ ಸಭೆ ಸೇರಲಿರುವ ಕೈ ಶಾಸಕರು ಮತ್ತೊಮ್ಮೆ ಚರ್ಚಿಸಲಿದ್ದಾರೆ.

ರಾಜ್ಯ ಸರ್ಕಾರದ ಆಡಳಿತ ವೈಫಲ್ಯ, ಪೊಲೀಸ್ ವ್ಯವಸ್ಥೆಯ ದುರ್ಬಳಕೆ ಬಗ್ಗೆ ಪ್ರಧಾನವಾಗಿ ಪ್ರಸ್ತಾಪಿಸುವುದು. ಬೀದರ್‌ನ ಶಾಹೀನ್ ಶಾಲೆ ಪ್ರಕರಣ. ಹುಬ್ಬಳ್ಳಿಯ ಕೆಎಲ್‌ಇ ಎಂಜಿನಿಯರಿಂಗ್ ಕಾಲೇಜಿನ ಕಾಶ್ಮೀರಿ ವಿದ್ಯಾರ್ಥಿಗಳ ಪಾಕ್ ಪರ ಘೋಷಣೆ ಪ್ರಕರಣ, ಸರ್ಕಾರದ ದ್ವಂದ್ವ ನಿಲುವುಗಳ ಬಗ್ಗೆ ಸಭೆಯಲ್ಲಿ ನಿರ್ಧರಿಸಲಾಗಿದೆ ಎನ್ನಲಾಗಿದೆ.



- ಆಡಳಿತ ವೈಫಲ್ಯದ ಬಗ್ಗೆ ಅಧಿವೇಶನದಲ್ಲಿ ಪ್ರಸ್ತಾಪ
- ಕಾಂಗ್ರೆಸ್ ಶಾಸಕಾಂಗ ಸಭೆಯಲ್ಲಿ ನಿರ್ಧಾರ

ಪ್ರವಾಹ ಸಂತ್ರಸ್ತರಿಗೆ ಈವರೆಗೆ ಸಮರ್ಪಕವಾಗಿ ಪರಿಹಾರ ಸಿಗದಿರುವ ಬಗ್ಗೆ ಗಮನ ಸೆಳೆಯುವುದು. ಕೇಂದ್ರ ಸರ್ಕಾರ ರಾಜ್ಯಕ್ಕೆ ಅನುದಾನ ನೀಡುವಲ್ಲಿ ತಾರತಮ್ಯ ತೋರುತ್ತಿರುವುದು, ಕಾಂಗ್ರೆಸ್ ನಾಯಕರು, ಮುಖಂಡರನ್ನೇ ಗುರಿಯಾಗಿಸಿ ಸುಳ್ಳು ಪ್ರಕರಣ ದಾಖಲಿಸುವುದು, ಪೊಲೀಸ್ ವ್ಯವಸ್ಥೆ ದುರ್ಬಳಕೆ, ರಾಜ್ಯದ ಆರ್ಥಿಕ ಸ್ಥಿತಿ ಹದಗೆಟ್ಟಿರುವುದು. ಪೌರತ್ವ ತಿದ್ದುಪಡಿ ಕಾಯ್ದೆ ವಿರುದ್ಧದ ಹೋರಾಟ ಹತ್ತಿಕ್ಕುವ ಪ್ರಯತ್ನ ವಿಚಾರಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಮುಗಿಬೀಳಲು ತೀರ್ಮಾನಿಸಲಾಗಿದೆ ಎಂದು ಹೇಳಲಾಗಿದೆ.

▶ 10ನೇ ಪುಟಕ್ಕೆ

# ಇಕ್ಕಟ್ಟಿಗೆ ಸಿಲುಕಿಸಲು ಕೈ ತಂತ್ರ

ಉವಾ 17/2/20

**1ನೇ ಪುಟದಿಂದ** ▶ ಉಭಯ ಸದನಗಳ ಸದಸ್ಯರು ಕಲಾಪ ಸಂದರ್ಭದಲ್ಲಿ ಕಡ್ಡಾಯವಾಗಿ ಹಾಜರಿದ್ದು, ಸಮಯ, ಸಂದರ್ಭ ಸಿಕ್ಕಾಗ ಸರ್ಕಾರದ ವೈಫಲ್ಯಗಳ ಬಗ್ಗೆ ದನಿ ಎತ್ತಬೇಕು. ಚರ್ಚೆಗಳಲ್ಲಿ ಸಕ್ರಿಯರಾಗಿ ಪಾಲ್ಗೊಳ್ಳಬೇಕು. ಕಾಂಗ್ರೆಸ್ ಪಕ್ಷದ ಧೋರಣೆ, ನಾಯಕತ್ವದ ಬಗ್ಗೆ ಆಡಳಿತ ಪಕ್ಷದವರು ಟೀಕಿಸಿದರೆ ಸಂಘಟಿತವಾಗಿ ನೀಡಬೇಕು ಎಂಬುದಾಗಿಯೂ ಹಿರಿಯ ನಾಯಕರು ಸೂಚನೆ ನೀಡಿದ್ದಾರೆ. ಬಿಜೆಪಿ ನಾಯಕರ ಪ್ರಚೋದನಕಾರಿ ಹೇಳಿಕೆಗಳು. ಕಂದಾಯ ಸಚಿವ ಆರ್. ಅಶೋಕ್ ಪುತ್ರನ ವಿರುದ್ಧ ಕೇಳಿಬಂದಿರುವ ಕಾರು ಅಪಘಾತ ಪ್ರಕರಣ, ನಾನಾ ಘಟನೆಗಳಲ್ಲಿ ಪ್ರಕರಣ ದಾಖಲಿಸುವಲ್ಲಿನ ತಾರತಮ್ಯ ಧೋರಣೆ ವಿರುದ್ಧವೂ ದನಿ ಎತ್ತುವ ಬಗ್ಗೆಯೂ ಚರ್ಚೆಯಾಗಿದೆ ಎನ್ನಲಾಗಿದೆ.

ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್, ವಿಧಾನಪರಿಷತ್ ಪ್ರತಿಪಕ್ಷ ನಾಯಕ ಎಸ್.ಆರ್. ಪಾಟೀಲ್, ಮುಖಂಡರಾದ ಡಿ.ಕೆ. ಶಿವಕುಮಾರ್, ಡಾ. ಜಿ. ಪರಮೇಶ್ವರ್, ಎಚ್.ಕೆ. ಪಾಟೀಲ್, ಕೆ.ಆರ್.ರಮೇಶ್ ಕುಮಾರ್, ಕೃಷ್ಣಭೈರೇಗೌಡ ಸೇರಿದಂತೆ ಶಾಸಕರು, ವಿಧಾನಪರಿಷತ್ ಸದಸ್ಯರು ಭಾಗವಹಿಸಿದ್ದರು.

ಸಿಎಎ ಪ್ರಸ್ತಾಪಿಸಿದರೆ ವಿರೋಧ: ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರ ಭಾಷಣಕ್ಕೆ ಅಡ್ಡಿಪಡಿಸಬಾರದು. ಒಂದೊಮ್ಮೆ ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಪೌರತ್ವ ತಿದ್ದುಪಡಿ ಕಾಯ್ದೆ ಬಗ್ಗೆ ರಾಜ್ಯಪಾಲರು ಪ್ರಸ್ತಾಪಿಸಿದರೆ ಪ್ರತಿಭಟನೆ ನಡೆಸಲು ಕಾಂಗ್ರೆಸ್ ನಿರ್ಧರಿಸಿದೆ.

ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಗೂ ಮುನ್ನ ವಿಧಾನಸಭೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಈ ಬಗ್ಗೆ ಚರ್ಚಿಸಲಾಗಿದೆ. ಮಾಜಿ ಸಚಿವರಾದ ಡಾ.ಜಿ.ಪರಮೇಶ್ವರ್, ರಾಮಲಿಂಗಾರೆಡ್ಡಿ, ಎಂ.ಕೃಷ್ಣಪ್ಪ, ಆರ್.ಬಿ. ತಿಮ್ಮಾಪುರ, ಮಾಜಿ ಸ್ಪೀಕರ್ ಕೆ.ಆರ್.ರಮೇಶ್ ಕುಮಾರ್, ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಎಸ್.ಆರ್.ಪಾಟೀಲ್ ಇತರರು ಪಾಲ್ಗೊಂಡಿದ್ದ ಸಭೆಯಲ್ಲಿ ಈ ಬಗ್ಗೆ ವಿಸ್ತೃತ ಚರ್ಚೆಯಾಯಿತು.

ರಾಜ್ಯಪಾಲರ ಭಾಷಣಕ್ಕೆ ಯಾವುದೇ ರೀತಿಯಲ್ಲಿ ಅಡ್ಡಿಪಡಿಸುವ ಇಲ್ಲವೇ ಪ್ರತಿಭಟನೆ ನಡೆಸುವುದಕ್ಕೆ ಮುಂದಾಗಬಾರದು, ಆದರೆ ಕೇಂದ್ರ ಜಾರಿಗೊಳಿಸಿರುವ ಸಿಎಎ ಬಗ್ಗೆ ರಾಜ್ಯಪಾಲರು ಉಲ್ಲೇಖಿಸಿದರೆ ಆಗ ಪ್ರತಿಭಟಿಸಬೇಕು ಎಂದು ಹಿರಿಯ ನಾಯಕರು ನಿರ್ಧರಿಸಿದ್ದಾರೆ ಎನ್ನಲಾಗಿದೆ.

5